061305

**ಕರ್ನಾಟಕ ವಿಧಾನ ಪರಿಷತ್ತು**

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 434

ಮಾನ್ಯ ಸದಸ್ಯರ ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 16.02.2023.

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ದಿನಾಂಕ:01.04.2006ರ ನಂತರ ನೇಮಕವಾಗಿರುವ ನೌಕರರ ಎನ್.ಪಿ.ಎಸ್. (NPS) ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆ ಜಾರಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್ ರವರು ರಚಿಸಿದ ಸಮಿತಿಯ ವರದಿಯ ಶಿಫಾರಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ದಿನಾಂಕ:01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಲ್.) 04 ಪಿಇಟಿ 2005, ದಿನಾಂಕ:31.03.2006 ರನ್ವಯ ದಿನಾಂಕ:01.04.2006 ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ರಾಷ್ಟ್ರೀಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸಿರುತ್ತದೆ.<br><br>ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವ ಪ್ರಸ್ತಾವನೆಯು ಸರ್ಕಾರದ ಮುಂದಿರುವುದಿಲ್ಲ. |
| ಆ) | ಮರಣ ಮತ್ತು ನಿವೃತ್ತಿ ಉಪದಾನ ಹಾಗೂ ಕುಟುಂಬ ಪಿಂಚಣಿ ಸೌಲಭ್ಯವನ್ನು 6ನೇ ವೇತನ ಆಯೋಗದಲ್ಲಿ ನೀಡಿದ್ದರೂ ಸ್ಪಷ್ಟ ಸರ್ಕಾರಿ ಆದೇಶ, ಮಾರ್ಗಸೂಚಿಗಳಿಲ್ಲದೇ ಮರಣ ಮತ್ತು ನಿವೃತ್ತಿ ಹೊಂದಿದ ನೌಕರರ ಮತ್ತು ಅವರ ಕುಟುಂಬಗಳು ಸದರಿ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? | ಇಲ್ಲ |

ಆಇ-ಪಿಇಎನ್/64 /2023

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ



Generated from eOffice by G JAGADEESHA, CMO-JS(GJ), JOINT SECRETARY, CMO on 13/02/2023 10:54 AM